ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಮರಳು ಅಭಾವದ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

498 (503) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮರಳು ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಸರ್ಕಾರವು ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗೆ ರೂಪಿಸಿರುವ ನೀತಿ/ನಿಯಮಗಳೇನು; (ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮರಳು ಪೂರೈಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಹಾಗೂ ಸರ್ಕಾರದಿಂದ ಮರಳು ಪೂರೈಸಲು ಗುರುತಿಸಿರುವ ಸ್ಥಳಗಳು ಯಾವುವು; ಹಾಗೂ ಸರ್ಕಾರ ಪ್ರತಿ ಟನ್ ಮರಳಿಗೆ ನಿಗಧಿಪಡಿಸಿರುವ ದರವೆಷ್ಟು;

(ಇ) ಕಳೆದ 2 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಎಷ್ಟು ಟನ್ ಮರಳು ಪೂರೈಕೆಗೆ ಬೇಡಿಕೆ ಇತ್ತು; ಎಷ್ಟು ಟನ್ ಮಾರಾಟ ಮಾಡಲಾಗಿದೆ; ಬೇಡಿಕೆಯಂತೆ ಪೂರ್ಣವಾಗಿ ಮರಳು ಪೂರೈಸಲಾಗಿದೆಯೇ? (ವಿವರ ನೀಡುವುದು)